# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | **77** |
| ಸದಸ್ಯರ ಹೆಸರು | : | ಶ್ರೀ ಕುಶಾಲಪ್ಪ ಎಂ.ಪಿ (ಸುಜಾ)<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 04-12-2023 |
| ಉತ್ತರಿಸುವ ಸಚಿವರು | : | ಮಾನ್ಯ ಇಂಧನ ಸಚಿವರು |

***

| | **ಪ್ರಶ್ನೆ** | **ಉತ್ತರ** |
|---|---|---|
| (ಅ) | ಸರ್ಕಾರವು ರಾಜ್ಯದಲ್ಲಿನ ಸಣ್ಣ ಮಧ್ಯಮ ಕಾಫಿ ಬೆಳೆಗಾರರ 10 ಹೆಚ್.ಪಿ ವರೆಗಿನ ನೀರಾವರಿ ವಿದ್ಯುತ್ ಪಂಪ್‌ಸೆಟ್ ಸ್ಥಾವರಗಳ ವಿದ್ಯುತ್ ಶುಲ್ಕವನ್ನು ಪಾವತಿಸಲು ವಿಧಿಸಿರುವ ಷರತ್ತುಗಳೇನ | ರಾಜ್ಯದಲ್ಲಿನ ಸಣ್ಣ ಮತ್ತು ಮಧ್ಯಮ ಕಾಫಿ ಬೆಳೆಗಾರರ 10 ಹೆಚ್.ಪಿ ವರೆಗಿನ ನೀರಾವರಿ ವಿದ್ಯುತ್ ಪಂಪು ಸೆಟ್ ಗಳ ವಿದ್ಯುತ್ ಶುಲ್ಕವನ್ನು ದಿನಾಂಕ: 01.07.2022 ರಿಂದ ಬಳಕೆಯಾಗುವ ವಿದ್ಯುತ್ ಬಳಕೆಗೆ ಅನ್ವಯವಾಗುವಂತೆ ಗ್ರಾಹಕರುಗಳಿಗೆ ಮರುಪಾವತಿಸಲಾಗುವುದು.<br><br>ಈ ಪ್ರವರ್ಗದ ಗ್ರಾಹಕರುಗಳು ಆಧಾರ್ ಕಾರ್ಡ್, ಬ್ಯಾಂಕ್ ಖಾತೆಯ ಸಂಖ್ಯೆ (ಖಾತೆಗೆ ಸಂಬಂಧಿಸಿದ ಇತರೆ ಮಾಹಿತಿಗಳನ್ನು ಒದಗಿಸತಕ್ಕದ್ದು) ಹಾಗೂ ಇತರೆ ಮಾಹಿತಿಗಳ ದೃಢೀಕೃತ ದಾಖಲೆಯನ್ನು ಒದಗಿಸುವುದು ಕಡ್ಡಾಯವಾಗಿರುತ್ತದೆ.<br><br>ಈ ಪ್ರವರ್ಗದ ಗ್ರಾಹಕರುಗಳ ವಿದ್ಯುತ್ ಸ್ಥಾವರಗಳಿಗೆ ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗವು ನಿಗಧಿಪಡಿಸಿರುವ ವಿದ್ಯುತ್ ದರ ಸೂಚಿಯಂತೆ ಮಾಸಿಕ ವಿದ್ಯುತ್ ಬಿಲ್ಲನ್ನು ಸಿದ್ಧಪಡಿಸಿ ನೀಡಲಾಗುವುದು.<br><br>ಈ ಸೌಲಭ್ಯಕ್ಕೆ ಅರ್ಹರಾಗುವ ಬಳಕೆದಾರರು / ಗ್ರಾಹಕರು ಮಾಸಿಕ ವಿದ್ಯುತ್ ಬಿಲ್ಲನ್ನು ಸಂಪೂರ್ಣವಾಗಿ ನಿಗದಿತ ಸಮಯದಲ್ಲಿ ಪಾವತಿಸಿದ ನಂತರ ಸದರಿ ಗ್ರಾಹಕರುಗಳಿಗೆ / ಬಳಕೆದಾರರಿಗೆ DBT ಯೋಜನೆಯ ವ್ಯವಸ್ಥೆಯಡಿ ಸರ್ಕಾರದಿಂದ ವಿದ್ಯುತ್ ಸರಬರಾಜು ಕಂಪನಿಗಳಿಗೆ ಒದಗಿಸುವ ಸಹಾಯಧನವನ್ನು ಮಾಸಿಕ ವಿದ್ಯುತ್ ಬಳಕೆ ಶುಲ್ಕದ ಮೇಲೆ ವಿಧಿಸುವ ವಿದ್ಯುತ್ ತೆರಿಗೆಯನ್ನು ಹೊರತುಪಡಿಸಿ, ನೇರವಾಗಿ ಗ್ರಾಹಕರ ಬ್ಯಾಂಕ್ ಖಾತೆಗೆ ಮರು ಪಾವತಿಸಲಾಗುವುದು (ಜಮಾ ಮಾಡಲಾಗುವುದು).<br><br>ಈ ಪ್ರವರ್ಗದ ಗ್ರಾಹಕರುಗಳ ಒಂದು ಸ್ಥಾವರಕ್ಕೆ ಮಾತ್ರ ಉಚಿತ ವಿದ್ಯುತ್ ಸೌಲಭ್ಯವನ್ನು ಒದಗಿಸಲಾಗುವುದು |

....2

| | | |
|---|---|---|
| ಆ) | ಸರ್ಕಾರಿ ಆದೇಶ ಸಂಖ್ಯೆ: ಎನರ್ಜಿ/521/ಪಿಎಸ್‌ಆರ್ /2021, ದಿನಾಂಕ: 20.07.2022 ರಲ್ಲಿ 10 ಹೆಚ್.ಪಿ ವರೆಗಿನ ನೀರಾವರಿ ಪಂಪ್‌ಸೆಟ್ ಸ್ಥಾವರಗಳ ವಿದ್ಯುತ್ ಶುಲ್ಕವನ್ನು ಸಣ್ಣ ಮತ್ತು ಮಧ್ಯಮ ಕಾಫಿ ಬೆಳೆಗಾರರು ಬಳಸಿದ ವಿದ್ಯುತ್ ಬಿಲ್‌ಗಳನ್ನು ಮೊದಲು ಪಾವತಿಸಿ, ನಂತರ ರೈತರ ಖಾತೆಗೆ ಮರುಪಾವತಿ ಮಾಡುವ ಷರತ್ತಿನ ಆದೇಶದಿಂದ ರೈತರ ವಿದ್ಯುತ್ ಬಿಲ್ ಪಾವತಿಸಲು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ರಾಜ್ಯ ಸರ್ಕಾರವು 2021-22ರ ಆಯವ್ಯಯದಲ್ಲಿ ಸರ್ಕಾರದ ಯೋಜನೆಗಳಡಿಯ ಫಲಾನುಭವಿಗಳಿಗೆ ಆರ್ಥಿಕ ನೆರವನ್ನು ಆಧಾರ್ ಆಧಾರಿತ ಪಾವತಿಯ ಡಿಬಿಟಿ ಅಡಿ ಪಾವತಿ ಮಾಡಲಾಗುತ್ತಿದ್ದು, ಈ ಸೌಲಭ್ಯ ವಿತರಣೆಯಲ್ಲಿ ಪಾರದರ್ಶಕತೆ ತರುವ ಉದ್ದೇಶದಿಂದ ಎಲ್ಲಾ ಯೋಜನೆಗಳಿಗೂ ಡಿಬಿಟಿ ಅಡಿ ಪಾವತಿ ಮಾಡಲು ಕ್ರಮ ವಹಿಸಲಾಗುವುದೆಂದು ಘೋಷಿಸಲಾಗಿರುತ್ತದೆ. ಅದರಂತೆ, ಆರ್ಥಿಕ ಇಲಾಖೆಯು ಹಾಗೂ ಇ-ಆಡಳಿತ ಇಲಾಖೆಯು ಎಲ್ಲಾ ಫಲಾನುಭವಿ ಆಧಾರಿತ ಯೋಜನೆಗಳನ್ನು ಡಿಬಿಟಿ ವ್ಯವಸ್ಥೆಯಡಿ ತರುವಂತೆ ಎಲ್ಲಾ ಇಲಾಖೆಗಳಿಗೆ ತಿಳಿಸಿದೆ.<br><br>ರಾಜ್ಯ ಸರ್ಕಾರವು ರಾಜ್ಯದಲ್ಲಿನ ಸಣ್ಣ ಮತ್ತು ಮಧ್ಯಮ ಕಾಫಿ ಬೆಳೆಗಾರರ 10 ಹೆಚ್.ಪಿ ವರೆಗಿನ ನೀರಾವರಿ ವಿದ್ಯುತ್ ಪಂಪ್‌ಸೆಟ್ ಸ್ಥಾವರಗಳ ವಿದ್ಯುತ್ ಶುಲ್ಕವನ್ನು ಹಲವು ಷರತ್ತು / ನಿಬಂಧನೆಗಳಿಗೊಳಪಟ್ಟು ಆರ್ಥಿಕ ಇಲಾಖೆಯ ಸಹಮತಿಯನ್ವಯ ಸರ್ಕಾರಿ ಆದೇಶ ಸಂಖ್ಯೆ ಎನರ್ಜಿ/521/ಪಿಎಸ್‌ಆರ್/2021 ದಿನಾಂಕ: 20.07.2022 ಅನ್ನು ಹೊರಡಿಸಲಾಗಿರುತ್ತದೆ.<br><br>ಈ ಯೋಜನೆಯಡಿ ಸೌಲಭ್ಯ ಪಡೆಯಲು ಅರ್ಹರಾಗುವ ಗ್ರಾಹಕರು ತಮ್ಮ ಸ್ಥಾವರದ ಮಾಸಿಕ ವಿದ್ಯುತ್ ಬಿಲ್ಲನ್ನು ಸಂಪೂರ್ಣವಾಗಿ ನಿಗದಿತ ಸಮಯದಲ್ಲಿ ಪಾವತಿಸಬೇಕಾಗಿರುತ್ತದೆ. ಮಾಸಿಕ ಬಿಲ್ಲಿನಲ್ಲಿನ ವಿದ್ಯುತ್ ತೆರಿಗೆ ಮೊತ್ತವನ್ನು ಹೊರತುಪಡಿಸಿ, ಉಳಿದ ಬಿಲ್ಲಿನ ಮೊತ್ತವನ್ನು DBT ವ್ಯವಸ್ಥೆಯಡಿ ನೇರವಾಗಿ ಗ್ರಾಹಕರ ಬ್ಯಾಂಕ್ ಖಾತೆಗೆ ಮರು ಪಾವತಿಸಲಾಗುವುದು (ಜಮಾ ಮಾಡಲಾಗುವುದು). |
| (ಇ) | ಕಾಫಿ ಬೆಳೆಗಾರರು ಕೇವಲ 3-4 ತಿಂಗಳು ಮಾತ್ರ ವಿದ್ಯುತ್ ಉಪಯೋಗಿಸುವುದರಿಂದ ಇತರ ಬೆಳೆಗಳಿಗೆ ನೀಡಿದಂತೆ ಕಾಫಿ ಬೆಳೆಗಾರರಿಗೂ ಪೂರ್ಣ ಪ್ರಮಾಣದಲ್ಲಿ ಉಚಿತ ವಿದ್ಯುತ್ ನೀಡುವ ಯೋಜನೆ ಸರ್ಕಾರದ ಮುಂದಿದೆಯೇ? | ಮೇಲ್ಕಂಡ ಸರ್ಕಾರಿ ಆದೇಶದ ಸೌಲಭ್ಯವನ್ನು 10 ಹೆಚ್.ಪಿ ವರೆಗಿನ ಎಲ್ಲಾ ಸಣ್ಣ ಮತ್ತು ಮಧ್ಯಮ ಕಾಫಿ ಬೆಳೆಗಾರರು ವರ್ಷದಲ್ಲಿ ಕೇವಲ 3-4 ತಿಂಗಳು ಮಾತ್ರ ವಿದ್ಯುತ್ ಬಳಸಿದರೂ ಅಥವಾ ವರ್ಷದ ಎಲ್ಲಾ ಮಾಹೆಗಳಲ್ಲಿ ವಿದ್ಯುತ್ ಬಳಸುವ ಈ ಪ್ರವರ್ಗದ ಗ್ರಾಹಕರಿಗೂ ಸಹ ಉಚಿತ ವಿದ್ಯುತ್ ಸೌಲಭ್ಯವನ್ನು ಒದಗಿಸಲಾಗುವುದು. |

ಸಂಖ್ಯೆ: ಎನರ್ಜಿ 270 ಇಬಿಎಸ್ 2023

**(ಕೆ.ಜೆ.ಜಾರ್ಜ್)**
**ಇಂಧನ ಸಚಿವರು**